## ಕರ್ನಾಟಕ ಸರ್ಕಾರದ ನಡಾವಳಿಗಳು
## ತಿದ್ದೋಲೆ

ಸಂಖ್ಯೆ: ಆರ್‌ಡಿ 94 ಡಿಎಸ್‌ಪಿ 2013 ದಿನಾಂಕ: 17-08-2013

ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಸಂಕಷ್ಟದಲ್ಲಿರುವ 40 ರಿಂದ 64 ವರ್ಷದೊಳಗಿನ ಅವಿವಾಹಿತ ಹಾಗೂ ವಿಚ್ಛೇದಿತ ಮಹಿಳೆಯರಿಗೆ ರೂ.500ಗಳ ಮಾಸಾಶನವನ್ನು ಸರ್ಕಾರಿ ಆದೇಶ ಸಂಖ್ಯೆ: ಆರ್‌ಡಿ 94 ಡಿಎಸ್‌ಪಿ 2013, ದಿನಾಂಕ: 01-08-2013 ರಂತೆ ಮನಸ್ವಿನಿ ಯೋಜನೆ ಜಾರಿಗೆ ತಂದಿದ್ದು, ಆದೇಶದ ನಿಯಾಮಾವಳಿಗಳ ನಿಯಮ 10(i)(1)ರಂತೆ, ಅರ್ಜಿದಾರರು ಯೋಜನೆಯಡಿ ಸವಲತ್ತಿಗೆ ಅರ್ಜಿಗಳನ್ನು ಸಲ್ಲಿಸುವಾಗ, ಅಂತ್ಯೋದಯ ಪಡಿತರ ಚೀಟಿ ಇಲ್ಲದಿದ್ದಲ್ಲಿ ಸ್ವಯಂಘೋಷಿತ ಆದಾಯ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು ಎಂಬ ನಿಯಮವನ್ನು ಬಿಪಿಎಲ್ ಪಡಿತರ ಚೀಟಿ ಇಲ್ಲದಿದ್ದಲ್ಲಿ ಸ್ವಯಂಘೋಷಿತ ಆದಾಯ ಪ್ರಮಾಣ ಪತ್ರವನ್ನು ಸಲ್ಲಿಸಬೇಕು ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

17/8/13

(ಎಸ್. ಕಾತ್ಯಾಯಿನಿ ದೇವಿ)
ಪೀಠಾಧಿಕಾರಿ
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು
ಕಂದಾಯ ಇಲಾಖೆ

**ಇವರಿಗೆ:** ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಕಳುಹಿಸಬೇಕೆಂದು ಕೋರಿದೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ)(ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯದರ್ಶಿಗಳವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯ ಮಂತ್ರಿಗಳವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
5. ವಿಭಾಗೀಯ ವ್ಯವಸ್ಥಾಪಕರು, ಭಾರತೀಯ ಜೀವ ವಿಮಾ ನಿಗಮ, ಪಿ&ಜಿಎಸ್ ಯುನಿಟ್, 4ನೇ ಮಹಡಿ, ಜೆ.ಸಿ. ರೋಡ್, ಬೆಂಗಳೂರು-02.
6. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಬೆಳಗಾವಿ/ಮೈಸೂರು/ಗುಲ್ಬರ್ಗಾ.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, ಬೆಂಗಳೂರು.
9. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
10. ಸಂಬಂಧಪಟ್ಟ ಉಪ ವಿಭಾಗಧಿಕಾರಿಗಳು/ತಹಸೀಲ್ದಾರರುಗಳಿಗೆ.
11. ಎಲ್ಲಾ ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು
12. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.